**ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ**
**ನ್ಯಾಯಾಲಯ ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ : 85/ 2015**

ಪಿರ್ಯಾದುದಾರರು : ಕುದೂರು ಪೋಲಿಸ್?ಠಾಣೆ

**ವಿರುದ್ಧ**

**ಆರೋಪಿಗಳು** :

**ಚಾಸಾ :- 14 / ಪ್ರಾಸಾ :- 07**

| | |
|---|---|
| ಹೆಸರು | **ಮಹಮ್ಮದ್ ಸಾದ್** |
| ತಂದೆಯ / ಗಂಡನ ಹೆಸರು | **ಮಹಮ್ಮದ್ ಮಸ್ತಕ್ ಅಹಮ್ಮದ್** |
| ವಯಸ್ಸು | **18** |
| ಉದ್ಯೋಗ | **1 ನೇ ಪಿ. ಯು. ಸಿ** |
| ವಿಳಾಸ | **ಬೆಂಗಳೂರು** |

**ದಿನಾಂಕ: 09-03-2022 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ :- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ :-**

ನಾನು ಆರೋಪಿಯನ್ನು ನೋಡಿರುವುದಿಲ್ಲ. ದಿ.21-03-2014 ರಂದು ಸುಮಾರು ಸಂಜೆ 3.30 ರಿಂದ 4 ಗಂಟೆ ಸಮಯದಲ್ಲಿ ಬೆಳ್ಳೂರು ಕ್ರಾಸ್ ನಿಂದ ಬೆಂಗಳೂರಿಗೆ ಬಸ್ ನಂ. ಕೆಎ-13-ಎಫ್ -1882 ಬಸ್ಸನ್ನು ಹತ್ತಿದ್ದು, ನಾನು ಹಿಂಬದಿಯಲ್ಲಿ ಕುಳಿತ್ತಿದ್ದು, ನನ್ನೊಂದಿಗೆ ನನ್ನ ಅಮ್ಮ ಮತ್ತು ಅಣ್ಣ ಬಂದಿದ್ದರು. ತಕ್ಷಣ ಬಸ್ಸು ಪಲ್ಟಿ ಹೊಡೆದಿದ್ದು, ಸದರಿ ಅಪಘಾತದಿಂದ ನನ್ನ ತಲೆಗೆ ಗಾಯವಾಗಿದ್ದು ನನ್ನನ್ನು ಆಸ್ಪತ್ರೆಗೆ ಸಾಗಿಸಿದ್ದು ನನ್ನ ತಲೆಗೆ ಶಸ್ತ್ರ ಚಿಕಿತ್ಸೆ

ಮಾಡಿರುತ್ತಾರೆ. ಆದರೆ ಯಾವ ಆಸ್ಪತ್ರೆಗೆ ನನ್ನನ್ನು ಕರೆದುಕೊಂಡು ಹೋಗಿದ್ದರು ಎಂದು ನನಗೆ ಗೊತ್ತಿಲ್ಲ. ನಾನು ಒಂದು ದಿನಗಳ ಕಾಲ ಚಿಕಿತ್ಸೆ ಪಡೆದುಕೊಂಡಿರುತ್ತೇನೆ. ಸದರಿ ಅಪಘಾತ ಹೇಗೆ ಮತ್ತು ಏಕೆ ಆಗಿದೆ ಎಂದು ನಾನು ತಿಳಿದುಕೊಂಡಿಲ್ಲ.

ಆರೋಪಿ ಪರ ವಕೀಲರು ಪಾಟೀ ಸವಾಲು ಇರುವು ದಿಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆ :- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**ಅ. ನ್ಯಾ. ದಂ. ಮತ್ತು ಜೆ. ಎಂ. ಎಫ್? ಸಿ. ಮಾಗಡಿ.**

# ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ

# ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 252 / 2018

ಪಿರ್ಯಾದುದಾರರು ಃ ಕುದೂರು ಪೋಲಿಸ್ ಠಾಣೆ

**ವಿರುದ್ಧ**

**ಆರೋಪಿಗಳು ಃ ಗೋವಿಂದಯ್ಯ ಮತ್ತು ಇತರರು**

**ಚಾಸಾ ಃ- 02 / ಪ್ರಾಸಾ ಃ- 02**

| | |
|---|---|
| ಹೆಸರು | **ಲೋಕೇಶ್** |
| ತಂದೆಯ / ಗಂಡನ ಹೆಸರು | **ಬೆಟ್ಟಸ್ವಾಮಿ** |
| ವಯಸ್ಸು | **35** |
| ಉದ್ಯೋಗ | **ವ್ಯವಸಾಯ** |
| ವಿಳಾಸ | **ಬೆಣಪ್ಪನಪಾಳ್ಯ,** |

**ದಿನಾಂಕಃ 27-10-2021 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ** ಃ- **ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ** ಃ-

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸುವಂತೆ ಕೇಳಿದಾಗ ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲಾತಿ ಮಹಜರ್ ಆಗಿದ್ದು, ಮಹಜರ್ ನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸದರಿ ದಾಖಲಾತಿಗೆ ನಾನು ಸುಮಾರು 4 ವರ್ಷಗಳ ಹಿಂದೆ ಗುಡೇಮಾರನಹಳ್ಳಿ ಬಸ್ ನಿಲ್ದಾಣದಲ್ಲಿ ಬಸ್ಸಿಗಾಗಿ

ಕಾಯುತ್ತಿರುವಾಗ ಪೋಲಿಸರು ನಿಪಿ-2 ಕ್ಕೆ ಸಹಿ ಮಾಡಿ ಎಂದು ಕೇಳಿದ ಬಾಬ್ತು ಸಹಿ ಮಾಡಿದ್ದು, ನಿಪಿ-2 ರಲ್ಲಿ ಏನು ಬರೆದಿರುತ್ತದೆಂದು ನನಗೆ ಗೊತ್ತಿರುವುದಿಲ್ಲ, ಪೋಲಿಸರ ಕೋರಿಕೆಯ ಮೇರೆಗೆ ನಿಪಿ-2 ಕ್ಕೆ ಸಹಿ ಮಾಡಿರುತ್ತೇನೆ. ನಿಪಿ-2 ರ ಕಾಲಕ್ಕೆ ಮಹಜರ್ ಕ್ರಮ ಅನುಸರಿಸಿ ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತು ಪಡಿಸಿರುವುದಿಲ್ಲ. ಇದನ್ನು ಹೊರತು ಪಡಿಸಿ ಪ್ರಕರಣದ ಬಗ್ಗೆ ಇನ್ನೇನು ಮಾಹಿತಿ ಇರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ಕುದೂರು ಪೋಲಿಸರು ನಿಪಿ-1 ರ ಆಧಾರದ ಮೇಲೆ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿದ್ದು, ಸದರಿ ಸ್ಥಳವನ್ನು ನಾನು ತೋರಿಸಿದ್ದು, ಆರೋಪಿತರುಗಳು ಕೃತ್ಯಕ್ಕೆ ಬಳಸಿದ್ದಂತಹ ದೊಣ್ಣೆಯನ್ನು ನಾನು ಹಾಜರು ಪಡಿಸಿದ್ದು, ಪೋಲಿಸರು ನನ್ನ ಸಮಕ್ಷಮ ಬೆಳಿಗ್ಗೆ 10 ರಿಂದ 11 ಗಂಟೆಯವರೆಗೆ ನಿಪಿ-2 ರಂತೆ ಮಹಜರ್ ಕ್ರಮ ಅನುಸರಿಸಿ, ಸದರಿ ದೊಣ್ಣೆಯನ್ನು ಅಮಾನತು ಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ತನಿಖಾಧಿಕಾರಿಗೆ ದಿನಾಂಕಃ 10-05-2015 ರಂದು ನಾನು ಈ ಮೇಲ್ಕಂಡ ವಿಳಾಸದಲ್ಲಿ ವಾಸವಾಗಿರುತ್ತೇನೆಂದು...... ಕೋರುತ್ತೇನೆಂದು ಈಗ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ-03 ಎಂದು ಗುರುತಿಸಲಾಯಿತು.

ಆರೋಪಿತರುಗಳೊಂದಿಗೆ ರಾಜೀ ಮಾಡಿಕೊಂಡ ಬಾಬ್ತು, ಆರೋಪಿತರುಗಳು ಆ ದಿವಸ ಅವಾಚ್ಯ ಶಬ್ದಗಳಿಂದ ನಿಂದಿಸಿ, ಪ್ರಾಣ ಬೆದರಿಕೆ ಹಾಕಿ ಹಾಗೂ ನ್ಯಾಯಾಲಯದ ಮುಂದಿರುವ ದೊಣ್ಣೆಯಿಂದ ಹಲ್ಲೆ ಪಡಿಸಿ ಸಾಮಾನ್ಯ ಸ್ವರೂಪದ ಗಾಯ ಪಡಿಸಿದ್ದರೂ ಸಹ ಆರೋಪಿತರುಗಳಿಗೆ ಸಹಾಯ ಮಾಡಲು ಈ ದಿವಸ ನ್ಯಾಯಾಲಯಕ್ಕೆ ಬಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು** ಃ- **ಶ್ರೀ. ಎಸ್.ಜಿ.ಆರ್** ವಕೀಲರಿಂದ **ಆರೋಪಿಗಳ** ಪರವಾಗಿ ಃ-

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಮರು ವಿಚಾರಣೆ ಃ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**ಅ. ನ್ಯಾ. ದಂ. ಮತ್ತು ಜೆ. ಎಂ. ಎಫ್. ಸಿ. ಮಾಗಡಿ.**